ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಿಗೆ ವೇತನ ನೀಡುವ ಬಗ್ಗೆ

13 (215) : ಶ್ರೀ ಬಸವರಾಜು ಹೆಚ್.ಡಿ. (ವಿರಾಜಪೇಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಹುದ್ದೆ ಎಷ್ಟಿವೆ;

ಆ) ಇವುಗಳ ಪೈಕಿ ಎಷ್ಟು ಹುದ್ದೆಗಳು ಖಾಲಿ ಇವೆ;

ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು;

ಈ) ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಿಗೆ ಈ ಮೊದಲು ಯಾವ ಮೂಲದಿಂದ ವೇತನ ನೀಡಲಾಗುತ್ತಿತ್ತು;

ಉ) ಈಗ ಯಾವ ಮೂಲದಿಂದ ನೀಡಲಾಗುತ್ತಿದೆ;

ಊ) ಗ್ರಾಮ ಪಂಚಾಯತಿ ಇಲಾಖೆಯ ಸರ್ಕಾರಿ ನೌಕರರ ಸಂಘದವರು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ಮೊದಲಿನಂತೆ ವೇತನ ನೀಡುವಂತೆ ಅಗ್ರಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಋ) ಈ ವಿಚಾರದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) 5653

ಆ) 392

ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದ್ದು, ಗ್ರೇಡ್-2 ಕಾರ್ಯದರ್ಶಿ ಹುದ್ದೆಗಳ ಶೇ. 40 ಭಾಗಕ್ಕೆ ಬಿಲ್ ಕಲೆಕ್ಟರ್ ವೃಂದದಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಈ) ಈ ಮೊದಲು ವೇತನವನ್ನು ಜಿಲ್ಲಾ ಪಂಚಾಯತ್ ನಿಧಿಯಿಂದ ಭರಿಸಲಾಗುತ್ತಿತ್ತು. (ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಣ ಅಧಿಕಾರಿಗಳ ಮುಖಾಂತರ).

ಉ) ಈಗಲೂ ಸಹ ಇವರ ವೇತನವನ್ನು ಜಿಲ್ಲಾ ಪಂಚಾಯತ್ ನಿಧಿಯಿಂದಲೇ ಪಾವತಿಸಲಾಗುತ್ತಿದೆ. (ಗ್ರಾಮ ಪಂಚಾಯತಿಯ ಕಾರ್ಯದರ್ಶಿಗಳು ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳ ಮುಖಾಂತರ)

ಊ) ಬಂದಿದೆ.

ಋ) ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮಕ್ಕೆ 2003 ರಲ್ಲಿ ತಂದಿರುವ ತಿದ್ದುಪಡಿಯ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳಿಗೆ ವೇತನ ಪಾವತಿಸುವಲ್ಲಿ ತೊಂದರೆಯಾಗಿರುವ ಬಗ್ಗೆ ಯಾವುದೇ ನಿರ್ದಿಷ್ಟ ಪ್ರಕರಣಗಳು ಸರ್ಕಾರಕ್ಕೆ ಗಮನಕ್ಕೆ ಬಂದಿರುವುದಿಲ್ಲ. ಕಂಡುಬಂದಲ್ಲಿ ಅದನ್ನು ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಭಾರತೀಯ ಆಡಳಿತ ಸೇವೆಗೆ ಇಲಾಖಾ ಅಧಿಕಾರಿಗಳ ಆಯ್ಕೆಯ ಬಗ್ಗೆ

14 (299) : ಶ್ರೀ ದೊಡ್ಡನಗೌಡ ಪಾಟೀಲ್ (ಕುಷ್ಟಗಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಭಾರತೀಯ ಆಡಳಿತ ಸೇವೆಗೆ ಕಂದಾಯ ಆಡಳಿತ ಸೇವೆಗೆ ಸೇರದ ಯಾವ ಯಾವ ಇಲಾಖೆಗಳ ಅಧಿಕಾರಿಗಳನ್ನು ಆಯ್ಕೆ ಮಾಡಿದೆ;